**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 19 (205) |
| ಉತ್ತರಿಸುವ ದಿನಾಂಕ | : | 09.12.2025 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯದ ಮದ್ರಾಸ್ ಪ್ರಾಂತ್ಯಗಳ ಜಿಲ್ಲೆಗಳು ರಾಜ್ಯದ ಇತರೆಡೆಗಳಿಗಿಂತ ಬೇರೆ ರೀತಿಯ ಕಂದಾಯ ಆಡಳಿತಾತ್ಮಕ ವ್ಯವಸ್ಥೆಯೊಂದಿಗೆ ಪ್ರತ್ಯೇಕ ನಿಯಮಗಳನ್ನು ಹೊಂದಿದ್ದು, ದಕ್ಷಿಣ ಕನ್ನಡ ಉಡುಪಿ ಜಿಲ್ಲೆಗಳಲ್ಲಿ ಏಕ / ಬಹು ಬಡಾವಣೆ ವಿನ್ಯಾಸ ಅನುಮೋದನೆ ನೀಡುವಲ್ಲಿ ಸಮಸ್ಯೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; | ರಾಜ್ಯದ ಇತರೆ ಜಿಲ್ಲೆಗಳಿಗಿಂತ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳು ಭೌಗೋಳಿಕವಾಗಿ ಭಿನ್ನವಾಗಿರುವುದರಿಂದ ಸದರಿ ಜಿಲ್ಲೆಗಳಿಗೆ ಅನ್ವಯವಾಗುವಂತೆ ಏಕ/ಬಹು ನಿವೇಶನ ವಿನ್ಯಾಸ ಅನುಮೋದನೆ ನೀಡುವ ಕುರಿತು ವಿಶೇಷ ಸೇವೆಗಳನ್ನು ಕಲ್ಪಿಸಿದ್ದು, ಸರ್ಕಾರದಿಂದ ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ.<br><br>1. ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಒಳಪಡದೇ ಇರುವ ಗ್ರಾಮ ಪಂಚಾಯತಿಯಲ್ಲಿನ ಒಂದು (01) ಎಕರೆ ಒಳಗಿನ ಜಮೀನುಗಳಿಗೆ ಅನುಮೋದನೆ ನೀಡುವ ಪ್ರಕರಣಗಳಿಗೆ ತಾಂತ್ರಿಕ ಅನುಮೋದನೆ ನೀಡಲು ಸಹಾಯಕ ನಿರ್ದೇಶಕರ ಕಛೇರಿ ಹಾಗೂ ಹತ್ತಿರದ ಯೋಜನಾ ಪ್ರಾಧಿಕಾರಗಳ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಿ, ತಾಲ್ಲೂಕು ಪಂಚಾಯತಿ ಕಛೇರಿಯಲ್ಲಿಯೇ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳು ಕಾರ್ಯ ನಿರ್ವಹಿಸಲು ಸರ್ಕಾರದ ಆದೇಶ ಸಂಖ್ಯೆ:ನಅಇ 292 ಮೈಅಪ್ರಾ 2024, ದಿನಾಂಕ:07-08-2024 ರಲ್ಲಿ ಆದೇಶಿಸಲಾಗಿದೆ(**ಪ್ರತಿಯನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ**).<br><br>2. ವಸತಿ ಮತ್ತು ವಸತಿಯೇತರ ಭೂ ಪರಿವರ್ತಿತ ಜಮೀನುಗಳ ಏಕ ನಿವೇಶನ ವಿನ್ಯಾಸಗಳಿಗೆ ಅನುಮೋದನೆ ನೀಡುವ ಕುರಿತಂತೆ ಕರಾವಳಿ |

| | | |
|---|---|---|
| | | ಭಾಗದಲ್ಲಿ ಸ್ವಂತ ಉಪಯೋಗದ ಫಾರ್ಮ್ ಹೌಸ್ / ಕಟ್ಟಡಗಳಿಗೆ ಅನುಮೋದನೆ ನೀಡುವ ಕೆಲವೊಂದು ನಿರ್ದಿಷ್ಟವಾದ ಪ್ರಕರಣಗಳಲ್ಲಿ ಪ್ರಶ್ನಿತ ಜಮೀನಿಗೆ ಸಂಪರ್ಕ ಕಲ್ಪಿಸುವ ಸಾರ್ವಜನಿಕ ರಸ್ತೆಗೆ ಲಗತ್ತಾಗಿರುವ ಜಮೀನಿಗೆ ಒಳಪಡದೇ ಇರುವ ಭಾಗಶ: ಜಮೀನಿನಲ್ಲಿ ಕಟ್ಟಡ ನಿರ್ಮಿಸಿದಲ್ಲಿ ಭೂ ಮಾಲೀಕರ ಮಾಲೀಕತ್ವದಲ್ಲಿರುವ ಜಮೀನಿನಿಂದ ಸಂಪರ್ಕ ಲಭ್ಯವಾಗುವುದರಿಂದ, ಇಂತಹ ಪ್ರಕರಣಗಳಿಗೆ ರಸ್ತೆ ಸಂಪರ್ಕ ಕಲ್ಪಿಸಲು ಪರಿತ್ಯಾಜ್ಯನ ಪತ್ರದ ಮೂಲಕ ರಸ್ತೆ ಜಾಗೆಯನ್ನು ಹಸ್ತಾಂತರಿಸಿಕೊಳ್ಳುವ ಅವಶ್ಯಕತೆ ಇರುವುದಿಲ್ಲವೆಂದು ನಿರ್ದೇಶನ ನೀಡಿ ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 292 ಮೈಅಪ್ರಾ 2024, ದಿನಾಂಕ:07/08/2024 ನ್ನು ಹೊರಡಿಸಲಾಗಿದೆ.<br>3. ಉಡುಪಿ ಮತ್ತು ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಅನ್ವಯಿಸುವಂತೆ 1000 ಚ.ಮೀ ಅಥವಾ ಅದಕ್ಕಿಂತ ಕಡಿಮೆ ಜಮೀನಿನ ವಿಸ್ತೀರ್ಣ ಭೂವಿಭಜನೆ ಮಾಡುವಾಗ ಉದ್ಯಾನವನ ಬಯಲುಜಾಗ ಮತ್ತು ನಾಗರೀಕ ಸೌಲಭ್ಯಕ್ಕಾಗಿ ಜಮೀನನ್ನು ಕಾಯ್ದಿರಿಸುವ ಬದಲಾಗಿ ಮಾರುಕಟ್ಟೆ ದರದ ಶೇ.15 ನ್ನು ಪಾವತಿಸಿಕೊಂಡು ಅನುಮೋದನೆ ನೀಡಲು ಸರ್ಕಾರದ ಆದೇಶ ಸಂಖ್ಯೆ: ನಅಇ/298/ಬೆಂರೂಪ್ರಾ/2013, ದಿನಾಂಕ:26-02-2014ರಲ್ಲಿ ವಿಶೇಷ ಅವಕಾಶ ಕಲ್ಪಿಸಲಾಗಿದೆ. **(ಪ್ರತಿಯನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ).**<br>4. ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳನ್ನು ಒಳಗೊಂಡಂತೆ ಇಡೀ ರಾಜ್ಯಕ್ಕೆ ಅನ್ವಯಿಸುವಂತೆ ಏಕ / ಬಹು ನಿವೇಶನ ವಿನ್ಯಾಸ ಅನುಮೋದನೆ ನೀಡುವ ಕುರಿತು ನಿಯಮಗಳನ್ನು ಸಮನ್ವಯಗೊಳಿಸಲು ಮತ್ತು ಅನುಮೋದನಾ ಪ್ರಕ್ರಿಯೆಯನ್ನು ಸುಗಮಗೊಳಿಸಲು ಹಾಗೂ ವಿನ್ಯಾಸ ಅನುಮೋದನೆಯನ್ನು ಪಾರದರ್ಶಕತೆ ಹಾಗೂ ಜನಸ್ನೇಹಿಯಾಗಿಸಲು ಅನುವಾಗುವಂತೆ Centre for E-Governance ವತಿಯಿಂದ Unified Land Management System ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗುತ್ತಿದೆ. |

| | | |
|---|---|---|
| (ಆ) | ರಾಜ್ಯದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಕೆ-4 ಸೇರ್ಪಡೆ ಮಾಡುವಾಗ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರೆ ಕಾನೂನುಗಳ(ತಿದ್ದುಪಡಿ) ಕಾಯಿದೆ, 2025 ರ ಮೂಲಕ ನಿಯಮಗಳನ್ನು ರೂಪಿಸುವಾಗ ರಾಜ್ಯದಲ್ಲಿ ಭಿನ್ನವಾಗಿರುವ ಕಂದಾಯ ನಿಯಮಗಳನ್ನು ಗಣನೆಗೆ ತೆಗೆದುಕೊಳ್ಳಲಾಗಿದೆಯೇ; | ಕರ್ನಾಟಕ ರಾಜ್ಯದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ರಾಜ್ಯದ ಇತರೆಡೆಗಳಿಗಿಂತ ವಿಭಿನ್ನ ರೀತಿಯ ಕಂದಾಯ ಆಡಳಿತಾತ್ಮಕ ವ್ಯವಸ್ಥೆ ಇದ್ದು, ಇದು ರಾಜ್ಯದ ಇತರೆ ಭಾಗಗಳಿಗಿಂತ ಭಿನ್ನವಾಗಿರುವುದನ್ನು ಪರಿಗಣಿಸಿ ಹಾಗೂ ಇತರೆ ಪ್ರದೇಶಗಳಿಗೆ ಹೋಲಿಸಿದಾಗ ಇರುವ ವ್ಯತ್ಯಾಸವನ್ನು ಗಮನಿಸಿ ಸರ್ಕಾರವು ಏಕ/ಬಹು ನಿವೇಶನ ವಿನ್ಯಾಸ ಅನುಮೋದನೆ ನೀಡುವ ಕುರಿತು ಸರ್ಕಾರದ ಅಧಿಸೂಚನೆ ಸಂಖ್ಯೆ:ಯುಡಿಡಿ 16 ಟಿಟಿಪಿ 2023(E), ದಿನಾಂಕ: 07-05-2025 ರಲ್ಲಿ The Karnataka Town and Country Planning (Development of land in areas other than Local Planning Areas) Regulations, 2025 ನಿಯಮಾವಳಿಗಳನ್ನು ಹೊರಡಿಸಲಾಗಿದೆ. |
| (ಇ) | ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಈಗಲೂ ಚಾಲ್ತಿಯಲ್ಲಿರುವ ಭೂ ಕಂದಾಯ ಪ್ರಕರಣಗಳಾದ ಮೂಲ ಗೇಣಿ, ಮೂಲಿ ಹಕ್ಕು, ಚಾಲ ಗೇಣಿ, ಡಿ ಸಿ ಮನ್ನಾ ಭೂಮಿಗಳು, ಪ್ರತ್ಯೇಕ ಭೂ ಪರಿವರ್ತನೆ ಪದ್ಧತಿಗಳು, ಹರಡಿಕೊಂಡಿರುವ ಮನೆಗಳು, ಗ್ರಾಮಠಾಣಾ ಇಲ್ಲದಿರುವುದು, ಇತ್ಯಾದಿಗಳಿಗೆ ಸಂಬಂಧಿಸಿದಂತೆ ರಾಜ್ಯಗ ಇತರೆ ಪ್ರದೇಶಗಳಿಗೆ ಹೋಲಿಸಿದಾಗ ಇರುವ ವ್ಯತ್ಯಾಸವನ್ನು ಸರ್ಕಾರ ಗಮನಿಸಿದೆಯೇ; | |
| (ಈ) | ಈ ವಸ್ತು ಸ್ಥಿತಿಯನ್ನು ಆಧರಿಸಿ ತಳಹಂತದ ಸಿಬ್ಬಂದಿಗಳಿಂದ ಹಿಮ್ಮಾಹಿತಿ ಪಡೆದು (ಫೀಡ್ ಬ್ಯಾಕ್) ಏಕ / ಬಹು ಬಡಾವಣೆ ವಿನ್ಯಾಸ ಅನುಮೋದನೆ ನಿಯಮಗಳಲ್ಲಿ ಅಗತ್ಯ ಮಾರ್ಪಾಡು ಮಾಡುವಲ್ಲಿ ಸರ್ಕಾರಕ್ಕೆ ಇರುವ ತೊಂದರೆ ಏನು: | ಏಕ / ಬಹು ನಿವೇಶನ ವಿನ್ಯಾಸ ಅನುಮೋದನೆ ನೀಡುವ ಕುರಿತು ಸಾರ್ವಜನಿಕರಿಂದ, ಗಣ್ಯ ವ್ಯಕ್ತಿಗಳಿಂದ ಸ್ವೀಕೃತವಾಗಿರುವ ಮನವಿ / ಸಲಹೆ / ಕೋರಿಕೆಗಳನ್ನು ನಿಯಮಾನುಸಾರ ಪರಿಶೀಲಿಸಿ ಸಾರ್ವಜನಿಕ ಹಿತದೃಷ್ಟಿಯಿಂದ ಕಾಲಕಾಲಕ್ಕೆ ಮೇಲ್ಕಂಡಂತೆ ಅಗತ್ಯ ಮಾರ್ಪಾಡುಗಳನ್ನು ಮಾಡಲಾಗಿರುತ್ತದೆ. |
| (ಉ) | ಸಮನ್ವಯತೆ ಕೊರತೆಯ ಕಾರಣ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳ ಜನರು ವಸತಿ ಸೌಲಭ್ಯ ಹೊಂದಲು, ಕಟ್ಟಡ ಪರವಾನಿಗೆ, ಕಟ್ಟಡ ಸಂಖ್ಯೆ, ಖಾತೆ ಬದಲಾವಣೆ, ತೆರಿಗೆ ಬದಲಾವಣೆ, ಉದ್ಯಮ ಪರವಾನಿಗೆ ಇತ್ಯಾದಿ ಸೌಲಭ್ಯ ಪಡೆಯುವಲ್ಲಿ ಇತ್ತೀಚಿಗೆ ತೊಂದರೆ ಅನುಭವಿಸುತ್ತಿರುವುದನ್ನು ಸರಿಪಡಿಸಲು ಸರಕಾರ ಕೈಗೊಂಡ ಕ್ರಮಗಳೇನು? | ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ವಿನ್ಯಾಸನಕ್ಕೆ ಅನುಮೋದನೆ ಪಡೆದ ಸ್ವತ್ತುಗಳಿಗೆ ಖಾತೆ ದಾಖಲಿಸಿ, ತೆರಿಗೆ ಪಾವತಿಸಿಕೊಂಡು ನಿರ್ಮಾಣ-2 ತಂತ್ರಾಂಶದಲ್ಲಿ ಕಟ್ಟಡ ಪರವಾನಿಗೆ ನೀಡಲಾಗುತ್ತಿದ್ದು, ಅದರಂತೆ ಅಧಿಕೃತ ಖಾತೆಗಳಿಗೆ ಉದ್ದಿಮೆ ಪರವಾನಿಗೆ ಸೌಲಭ್ಯವನ್ನು ವ್ಯಾಪಾರ್ ತಂತ್ರಾಂಶದಲ್ಲಿ ನೀಡಲಾಗುತ್ತಿದೆ.<br><br>ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದ (ಅನಧಿಕೃತ) ಸ್ವತ್ತುಗಳಿಗೆ ನಮೂನೆ 3-A |

| | | |
|---|---|---|
| | | ನೀಡಲಾಗುತ್ತಿದ್ದು, ಸದರಿ ಖಾತೆಗಳಿಗೆ ಕಟ್ಟಡ ಹಾಗೂ ಉದ್ದಿಮೆ ಪರವಾನಿಗೆ ನೀಡಲು ಪ್ರಸ್ತುತ ಅವಕಾಶವಿರುವುದಿಲ್ಲ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 556 ಮೈಅಪ್ರಾ 2013, ದಿನಾಂಕ:28.05.2014 ರಲ್ಲಿ Karnataka Town and Country Planning (Regularization of unauthorized Development of construction) Rules, 2014 ನ್ನು ಜಾರಿಗೆ ತಂದಿರುತ್ತದೆ. ಸದರಿ ನಿಯಮಕ್ಕೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು SLP(C)No. 956-957/2017 ರಂದು ಮಧ್ಯಂತರ ತಡೆಯಾಜ್ಞೆಯನ್ನು ಮುಂದಿನ ಆದೇಶದವರೆಗೂ ಮುಂದುವರೆಸುವಂತೆ ಆದೇಶ ನೀಡಿರುತ್ತದೆ. ಆದ್ದರಿಂದ ಅನಧಿಕೃತ ಸ್ವತ್ತುಗಳಿಗೆ ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡಲು ಪ್ರಸ್ತುತ ಅವಕಾಶವಿರುವುದಿಲ್ಲ. |

ಕಡತ ಸಂಖ್ಯೆ: ನಅಇ 513 ಮೈಅಪ್ರಾ 2025

(ಬಿ.ಎಸ್.ಸುರೇಶ)
ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು

ಅನುಬಂಧ-1

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರಾವಳಿ ಭಾಗದಲ್ಲಿ 01 ಎಕರೆವರಗೆ ಏಕ ನಿವೇಶನ ವಿನ್ಯಾಸಗಳಿಗೆ ಅನುಮೋದನೆ ನೀಡುವ ಸಂಬಂಧ ಅಧಿಕಾರ ಪ್ರತ್ಯಾಯೋಜಿಸುವ ಬಗ್ಗೆ.

**ಓದಲಾಗಿದೆ:** ಕರಾವಳಿ ಭಾಗದಲ್ಲಿ ಬರುವ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ವಸತಿ ಮತ್ತು ವಾಣಿಜ್ಯ ಭೂಪರಿವರ್ತಿತ ಜಮೀನುಗಳ ಏಕ ನಿವೇಶನ ವಿನ್ಯಾಸಗಳಿಗೆ ಅನುಮೋದನೆ ನೀಡುವ ಸಮಸ್ಯೆಗಳ ಬಗ್ಗೆ ಚರ್ಚಿಸಲು ಸನ್ಮಾನ್ಯ ಸಭಾಧ್ಯಕ್ಷರ ಅಧ್ಯಕ್ಷತೆಯಲ್ಲಿ ದಿ: 25.07.2024 ರಂದು ಜರುಗಿದ ಸಭೆ.

*****

**ಪ್ರಸ್ತಾವನೆ:**

ದಿನಾಂಕ:12/8/2024ರಂದು

ಕರಾವಳಿ ಭಾಗದ ಶಾಸಕರು ಈ ಹಿಂದ 25 ಸೆಂಟ್ಸ್ ವಿಸ್ತೀರ್ಣವರೆಗಿನ ಜಮೀನುಗಳಿಗೆ ಗ್ರಾಮ ಪಂಚಾಯಿತಿಗಳಿಂದ; 25 ಸೆಂಟ್ಸ್ ಮೇಲ್ಪಟ್ಟು ಒಂದು ಎಕರೆವರೆಗಿನ ಜಮೀನುಗಳಿಗೆ ತಾಲ್ಲೂಕು ಪಂಚಾಯಿತಿಗಳಿಂದ; ಒಂದು ಎಕರ ಮೇಲ್ಪಟ್ಟ ವಿಸ್ತೀರ್ಣದ ಜಮೀನುಗಳಿಗೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ವಿನ್ಯಾಸಗಳಿಗೆ ಅನುಮೋದನೆ ಪಡೆದು ನಮೂನೆ 9 ಮತ್ತು 11 ಗಳನ್ನು ಈ ಹಿಂದೆ ನೀಡಲಾಗುತ್ತಿದ್ದ ಬಗ್ಗೆ ಸಭೆಗೆ ವಿವರಿಸಿ ಪ್ರಸ್ತುತ ಸರ್ಕಾರದಿಂದ ಹೊರಡಿಸಲಾಗಿರುವ ಆದೇಶದ ಹಿನ್ನಲೆಯಲ್ಲಿ ಮಿತಿ ಇಲ್ಲದೇ ಎಲ್ಲ ಜಮೀನುಗಳಿಗೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ವಿನ್ಯಾಸ ಅನುಮೋದನೆ ಪಡೆಯಬೇಕಾಗಿರುವುದರಿಂದ ಕರಾವಳಿ ಭಾಗದಲ್ಲಿನ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಕರಾವಳಿ ಭಾಗದಲ್ಲಿನ ಗ್ರಾಮಪಂಚಾಯಿತಿ ವ್ಯಾಪ್ತಿಯಿಂದ ಜಿಲ್ಲಾ ಕೇಂದ್ರದವರೆಗೆ ಸಾರ್ವಜನಿಕರು ಸಂಪರ್ಕ ಹೊಂದುವ ಸಮಸ್ಯೆಯನ್ನು ನಿವಾರಿಸಲು ಜಿಲ್ಲಾ ಕೇಂದ್ರದೊಂದಿಗೆ ಜಿಲ್ಲೆಯಲ್ಲಿ ವಿವಿಧ ಯೋಜನಾ ಪ್ರಾಧಿಕಾರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸುವುದರೊಂದಿಗೆ ಯೋಜನಾ ಪ್ರಾಧಿಕಾರಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಲು ತೀರ್ಮಾನಿಸಲಾಗಿರುತ್ತದೆ.

ಸದರಿ ಸಭೆಯ ತೀರ್ಮಾನದಂತೆ ದಕ್ಷಿಣ ಕನ್ನಡ, ಉತ್ತರ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಕಾರ್ಯವ್ಯಾಪ್ತಿಯನ್ನು ನಿಗಧಿಪಡಿಸಲು ನಿರ್ಣಯಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 292 ಮೈಅಪ್ರಾ 2024,**

**ದಿನಾಂಕ:07.08.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-K ಹಾಗೂ 76K ರಡಿ ಪ್ರದತ್ತವಾದ ಅಧಿಕಾರದನ್ವಯ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಒಳಪಡದೇ ಇರುವ ಗ್ರಾಮ

ಪಂಚಾಯಿತಿ ವ್ಯಾಪ್ತಿಯಲ್ಲಿನ ಒಂದು (01) ಎಕರೆ ಒಳಗಿನ ಜಮೀನುಗಳಿಗೆ ಅನುಮೋದನೆ ನೀಡುವ ಪ್ರಕರಣಗಳಿಗೆ ತಾಂತ್ರಿಕ ಅನುಮೋದನೆ ನೀಡಲು ಈ ಕೆಳಕಂಡಂತೆ ಅಧಿಕಾರ ವ್ಯಾಪ್ತಿಯನ್ನು ನಿಗಧಿಪಡಿಸಿ ಆದೇಶಿಸಲಾಗಿದೆ.

| ದಕ್ಷಿಣ ಕನ್ನಡ ಜಿಲ್ಲೆ | | |
|---|---|---|
| ಪ್ರಾಧಿಕಾರ/ ಕಛೇರಿ | ಹುದ್ದೆ | ವಿಸ್ತರಿಸಿರುವ ಕಾರ್ಯ ವ್ಯಾಪ್ತಿ |
| ಬಂಟ್ವಾಳ ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಬಂಟ್ವಾಳ | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಬಂಟ್ವಾಳ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರಗಳು /ಗ್ರಾಮ ಪಂಚಾಯಿತಿಗಳು |
| ಮೂಡಬಿದರೆ ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಮೂಡಬಿದರೆ | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಮೂಡಬಿದರೆ ಮತ್ತು ಬೆಳ್ತಂಗಡಿ ತಾಲ್ಲೂಕುಗಳಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ಪುತ್ತೂರು ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಪುತ್ತೂರು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಪುತ್ತೂರು ಮತ್ತು ಸುಳ್ಯ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿ, ಮಂಗಳೂರು | ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು | ಮುಲ್ಕಿ, ಉಲ್ಲಾಳ ತಾಲ್ಲೂಕು ಹಾಗೂ ಮಂಗಳೂರು ತಾಲ್ಲೂಕಿನ (ಸ್ಥಳೀಯ ಯೋಜನಾ ಪ್ರದೇಶಕ್ಕೆ ಒಳಪಡದ) ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |

| ಉತ್ತರ ಕನ್ನಡ ಜಿಲ್ಲೆ | | |
|---|---|---|
| ಪ್ರಾಧಿಕಾರ/ ಕಛೇರಿ | ಹುದ್ದೆ | ವಿಸ್ತರಿಸಿರುವ ಕಾರ್ಯ ವ್ಯಾಪ್ತಿ |
| ಶಿರಸಿ ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಶಿರಸಿ | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಶಿರಸಿ, ಹಳಿಯಾಳ ಮತ್ತು ದಾಂಡೇಲಿ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿ, ಕಾರವಾರ | ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಅಂಕೋಲಾ, ಕುಮಟಾ, ಹೊನ್ನಾವರ ಮತ್ತು ಭಟ್ಕಳ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿ, ಶಿರಸಿ | ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಯಲ್ಲಾಪುರ, ಮುಂಡಗೋಡ ಮತ್ತು ಸಿದ್ದಾಪುರ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |

| ಉಡುಪಿ ಜಿಲ್ಲೆ | | |
|---|---|---|
| ಪ್ರಾಧಿಕಾರ/ ಕಛೇರಿ | ಅಧಿಕಾರ ಪ್ರತ್ಯಾಯೋಜಿಸಿರುವ ಅಧಿಕಾರಿ | ಅಧಿಕಾರ ಪ್ರತ್ಯಾಯೋಜಿಸಿರುವ ತಾಲ್ಲೂಕುಗಳು |
| ಕುಂದಾಪುರ ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಕುಂದಾಪುರ | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಕುಂದಾಪುರ ಮತ್ತು ಬೈಂದೂರು ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ಕಾಪು ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಕಾಪು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಕಾಪು ಮತ್ತು ಕಾರ್ಕಳ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ |

| | | |
|---|---|---|
| | | ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿ, ಉಡುಪಿ | ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಉಡುಪಿ, ಬ್ರಹ್ಮಾವರ ಹಾಗೂ ಹೆಬ್ರಿ ತಾಲ್ಲೂಕಿನ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |

ಮೇಲ್ಕಂಡ ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಒಳಪಡುವ ಪ್ರತಿ ತಾಲ್ಲೂಕಿನ ಕಾರ್ಯವಾಪ್ತಿಯ ಒಳಗಡೆ ಬರುವ ಪ್ರಕರಣಗಳನ್ನು ಸಕಾಲದಲ್ಲಿ ಇತ್ಯರ್ಥಗೊಳಿಸಲು ನಿರ್ದೇಶಿಸಿದೆ.

**ತಾಲ್ಲೂಕು ಪಂಚಾಯಿತಿ ಕ್ರಮ:**

ತಾಲ್ಲೂಕು ಪಂಚಾಯಿತಿ ಕಛೇರಿಯಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಅಧಿಕಾರಿಗಳಿಗೆ ಕಾರ್ಯನಿರ್ವಹಿಸಲು ಅಗತ್ಯ ಸ್ಥಳಾವಕಾಶ, ಪೀ ಕಂಪ್ಯೂಟರ್, ಸಿಬ್ಬಂದಿ(ಕನಿಷ್ಟ 01 ಪ್ರಥಮ ದರ್ಜೆ ಸಹಾಯಕ/ದ್ವಿತೀಯ ದರ್ಜೆ ಸಹಾಯಕ ಹಾಗೂ 01 ಡಿ ಗ್ರೂಪ್ ನೌಕರ) ಒದಗಿಸುವುದು.

**ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಕ್ರಮ:**

1. ಕ್ರಮ ಕೈಗೊಂಡ ಕಡತದ ಒಂದು ಸಂಪೂರ್ಣ ಪ್ರತಿಯನ್ನು ತಮ್ಮ ಕಛೇರಿಯಲ್ಲಿಯೂ ಸಹ ನಿರ್ವಹಿಸುವುದು.
2. ಕ್ರಮ ಕೈಗೊಂಡ ಕಡತಗಳ ಮಾಸಿಕ ವರದಿಯನ್ನು ಮೈಸೂರು ವಿಭಾಗೀಯ ಕಛೇರಿಗೆ ಸಲ್ಲಿಸುವುದು.
3. ಮೈಸೂರು ವಿಭಾಗೀಯ ಕಛೇರಿಯು ಮಾಸಿಕ ವರದಿಯನ್ನು ಕ್ರೋಢೀಕರಿಸುವುದು.
4. ಮೈಸೂರು ವಿಭಾಗೀಯ ಕಛೇರಿಯು ಕಾಲಕಾಲಕ್ಕೆ ಕಛೇರಿ ತಪಾಸಣೆ ನಡೆಸಿ ಯಾವುದೇ ಕಡತ ಬಾಕಿ ಇಲ್ಲದಂತೆ ಖಾತರಿಪಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

**ಇವರಿಗೆ**

1. ಅಪರ ಮುಖ್ಯಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು, ಮತ್ತು ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ.

3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಕೇಂದ್ರ ಕಚೇರಿ, ಬೆಂಗಳೂರು.
4. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಚೇರಿ ಧಾರವಾಡ.
5. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಚೇರಿ, ಬೆಂಗಳೂರು, ಮೈಸೂರು, ಕಲಬುರಗಿ.
6. ರಾಜ್ಯದ ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಮುಖಾಂತರ.
7. ನಗರ ಯೋಜಕ ಸದಸ್ಯರು ಹಾಗೂ ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರಾಭಿವೃದ್ಧಿ / ಯೋಜನಾ ಪ್ರಾಧಿಕಾರಗಳು, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಮುಖಾಂತರ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ:

1. ಸನ್ಮಾನ್ಯ ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.

RNI No. KARBIL/2001/47147

(30)
ಅನುಬಂಧ-02

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ - IV-A | ಬೆಂಗಳೂರು, ಬುಧವಾರ, ಫೆಬ್ರವರಿ ೨೬, ೨೦೧೪ (ಫಾಲ್ಗುಣ ೭, ಶಕ ವರ್ಷ ೧೯೩೫) | ನಂ. ೧೬೬ |
| Part - IV-A | Bangalore, Wednesday, February 26, 2014 (Phalguna 7, Shaka Varsha 1935) | No. 166 |


## ನಗರಾಭಿವೃದ್ಧಿ ಸಚಿವಾಲಯ

### ಅಧಿಸೂಚನೆ

ಸಂ: ನಅಇ 298 ಬೆಂರೂಪ್ರಾ 2013, ಬೆಂಗಳೂರು, ದಿನಾಂಕ: 26-02-2014

ದಿನಾಂಕ: 14.09.2012ರಂದು ಹೊರಡಿಸಲಾಗಿದ್ದ, ಅಧಿಸೂಚನೆ ಸಂಖ್ಯೆ:ನಅಇ 162 ಬೆಂರೂಪ್ರಾ 2011ನ್ನು ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಮಹಾಯೋಜನೆಯ ವ್ಯಾಪ್ತಿಗೆ ಮತ್ತು ಉಡುಪಿ ನಗರಾಭಿವೃದ್ಧಿ ಪ್ರಾಧಿಕಾರದ ಮಹಾಯೋಜನೆಯ ವ್ಯಾಪ್ತಿಗೆ ಅನ್ವಯಿಸದಂತೆ ಹಿಂಪಡೆದು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ (1963ರ ಕರ್ನಾಟಕ ಅಧಿನಿಯಮ ಸಂಖ್ಯೆ 11)ರ ಪ್ರಕರಣ 13ಇ ರ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಮಂಗಳೂರು ಮತ್ತು ಉಡುಪಿ ನಗರಾಭಿವೃದ್ಧಿ ಪ್ರಾಧಿಕಾರಗಳ ಮಹಾಯೋಜನೆಗಳ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಲ್ಲಿ ಅನುಮೋದನೆಗೊಂಡಿರುವ ಮಹಾಯೋಜನೆಗಳ ವಲಯ ನಿಯಮಾವಳಿಗಳ ಉಪಯೋಜನೆಯ ನಿಯಮಗಳಿಗೆ ತಿದ್ದುಪಡಿ ಪ್ರಸ್ತಾಪಿಸಿ, ಕರಡು ಅಧಿಸೂಚನೆ ಸಂಖ್ಯೆ:ನಅಇ 298 ಬೆಂರೂಪ್ರಾ 2013, ದಿನಾಂಕ;26.12.2013ನ್ನು ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ (ಭಾಗ-IV A ದಿನಾಂಕ:27.12.2013) ಪ್ರಕಟಿಸಿ, ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಟಣೆಗೊಂಡ ದಿನಾಂಕದಿಂದ 30 ದಿನಗಳಗೊಳಗಾಗಿ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಿರುವುದರಿಂದ;

ಮತ್ತು ಸದರಿ ರಾಜ್ಯ ಪತ್ರವನ್ನು 2013ರ ಡಿಸೆಂಬರ್ 27 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಸ್ವೀಕರಿಸಿದ್ದು, ಮತ್ತು ಪರಿಗಣಿಸಲಾಗಿರುವುದರಿಂದ;

ಕರ್ನಾಟಕ ಸರ್ಕಾರವು 1961ರ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ (1963ರ ಕರ್ನಾಟಕ ಅಧಿನಿಯಮ ಸಂಖ್ಯೆ 11)ರ ಪ್ರಕರಣ 13ಇ ರ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಈ ಕೆಳಕಂಡಂತೆ ತಿದ್ದುಪಡಿ ಮಾಡಿರುತ್ತದೆ.

ಉಡುಪಿ ಹಾಗೂ ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸಂಬಂಧಿಸಿದಂತೆ-ಸರ್ಕಾರಿ ಆದೇಶ ಸಂಖ್ಯೆ:ನಅಇ 422 ಮೈಅಪ್ರಾ 2008, ದಿನಾಂಕ:07.08.2008 ಮತ್ತು ನಅಇ 186 ಮೈಅಪ್ರಾ 2009, ದಿನಾಂಕ:10.09.2009 ಅನುಮೋದಿಸಲಾದ ಮಹಾಯೋಜನೆಯ ವಲಯ ಈ ಕೆಳಕಂಡಂತೆ ವಿನಿಯಮಗಳನ್ನು ಮಾರ್ಪಾಡಿಸಿದೆ, ಎಂದರೆ.

ಭೂ ವಿಭಜನೆ ಮಾಡುವಾಗ ಬಯಲು ಜಾಗ ಮತ್ತು ನಾಗರೀಕ ಸೌಲಭ್ಯಗಳ ವಿನಾಯಿತಿ ಕುರಿತು

ಭೂ ಪರಿವರ್ತನೆಯಾದ ಆದೇಶದಲ್ಲಿ ಜಮೀನಿನ ವಿಸ್ತೀರ್ಣವು 1,000 ಚದರ ಮೀಟರ್ (0.10 ಹೆಕ್ಟೇರ್ಸ್) ಅಥವಾ ಅದಕ್ಕಿಂತ ಕಡಿಮೆ ಇದ್ದಲ್ಲಿ ಮಾತ್ರ ಪ್ರಾಧಿಕಾರವು ಖಾಸಗಿ ವಸತಿ ವಿನ್ಯಾಸಗಳನ್ನು ಅನುಮೋದಿಸುವಾಗ ಮಹಾಯೋಜನೆಯ ಅನುಮೋದಿತ ವಲಯ ನಿಯಮಾವಗಳಲ್ಲಿನ ಉಪ ವಿಭಜನೆ ನಿಯಮಗಳಲ್ಲಿರುವಂತೆ ವಿನ್ಯಾಸ ಉದ್ಯಾನವನ:ಬಯಲುಜಾಗ ಹಾಗೂ ನಾಗರೀಕ ಸೌಲಭ್ಯಗಳಿಗಾಗಿ ಕಾಯ್ದಿರಿಸುವ ಅಗತ್ಯವಿರುವುದಿಲ್ಲ. ಆದರೆ, ಇದಕ್ಕೆ ಬದಲಾಗಿ ಒಟ್ಟಾರೆ ಶೇ:15ರಷ್ಟು ವಿಸ್ತೀರ್ಣವು ಜಮೀನಿಗೆ ಉಪನೋಂದಣಾಧಿಕಾರಿ ಕಛೇರಿಯಲ್ಲಿ ನಿಗಧಿಪಡಿಸಿದ ಭೂ ಪರಿವರ್ತಿತ ಜಮೀನಿನ ಮಾರ್ಗಸೂಚಿ ಬೆಲೆಯನ್ನು (Guidance Value) ಆಧರಿಸಿ, ಹಣವನ್ನು ಜಮೀನಿನ ಮಾಲೀಕರು/ಅಭಿವೃದ್ಧಿದಾರರಿಂದ ವಿನಾಯಿತಿ ಶುಲ್ಕವಾಗಿ ಭರಿಸಿಕೊಳ್ಳತಕ್ಕದ್ದು ಹಾಗೂ ಒಂದು ವೇಳೆ ವಿನ್ಯಾಸದಲ್ಲಿ ಅಗತ್ಯ ರಸ್ತೆ ಜಾಲದ ಪ್ರದೇಶವನ್ನು ಅಳವಡಿಸಿದ ನಂತರ ಹೆಚ್ಚುವರಿ ಜಾಗ ಉಳಿದಲ್ಲಿ ಅದನ್ನು ವಸತಿ ಉದ್ದೇಶಕ್ಕಾಗಿ ಪರಿಗಣಿಸತಕ್ಕದ್ದು.

ಸದರಿ ವಿನ್ಯಾಸದಲ್ಲಿ ಅಳವಡಿಸಿದ ರಸ್ತೆ ಜಾಲದ ಪ್ರದೇಶವು ಶೇ:45 ಅಥವಾ ಅದಕ್ಕಿಂತ ಹೆಚ್ಚಿನ ವಿಸ್ತೀರ್ಣದ ಜಾಗವು ಒಳಗೊಂಡಂತಹ ಸಂದರ್ಭದಲ್ಲಿ ಉದ್ಯಾನವನ/ಬಯಲುಜಾಗ ಮತ್ತು ನಾಗರೀಕ ಸೌಲಭ್ಯ ಜಾಗದ ವಿನಾಯಿತಿ ಶುಲ್ಕವನ್ನು ಪಾವತಿಸಿಕೊಳ್ಳುವ ಅಗತ್ಯವಿರುವುದಿಲ್ಲ.

ಜಮೀನಿನ ಮಾಲೀಕರು/ಅಭಿವೃದ್ಧಿದಾರರು ಸದರಿ ವಿನಾಯಿತಿ ಶುಲ್ಕವನ್ನು ಪಾವತಿಸಲು ನಿರಾಕರಿಸಿದಲ್ಲಿ ವಸತಿಗಾಗಿ ಗರಿಷ್ಠ ಶೇ:55 ಹಾಗೂ ರಸ್ತೆ ನಂತರ ಉಳಿಯುವ ವಿಸ್ತೀರ್ಣದ ಜಾಗವನ್ನು ವಿನ್ಯಾಸ ನಕ್ಷೆಯಲ್ಲಿ ಒಂದೇ ಕಡೆ ಬರುವಂತೆ ಪ್ರತ್ಯೇಕವಾಗಿ ಗುರುತಿಸತಕ್ಕದ್ದು, ಹಾಗೂ ಪ್ರಾಧಿಕಾರ/ಸ್ಥಳೀಯ ಸಂಸ್ಥೆಗಳು ಸದರಿ ಜಾಗವನ್ನು ಮುಕ್ತಟೆಯಾಗಿ ನೋಂದಾಯಿತ ಪರಿತ್ಯಜನಾ ಪತ್ರದ ರೂಪದಲ್ಲಿ ಸ್ವಾಧಿನಕ್ಕೆ ಪಡೆದು ನಂತರ ಹರಾಜು ಮೂಲಕ ವಿಲೇವಾರಿ ಮಾಡಬಹುದಾಗಿದೆ.

ಉದ್ಯಾನವನ/ಬಯಲುಜಾಗ ಮತ್ತು ನಾಗರೀಕ ಸೌಲಭ್ಯಗಳ ವಿನಾಯಿತಿ ಶುಲ್ಕ ಅಥವಾ ಪ್ರಾಧಿಕಾರ/ಸ್ಥಳೀಯ ಸಂಸ್ಥೆಗಳು ಸ್ವಾಧೀನಕ್ಕೆ ತೆಗೆದುಕೊಳ್ಳುವ ಜಾಗವನ್ನು ಹರಾಜು ಮೂಲಕ ವಿಲೇವಾರಿ ಮಾಡಿದಾಗ ಬರುವ ಮೊಬಲಗು ಸೇರಿದಂತೆ ಖಾಸಗಿ ಮಾಲೀಕರಿಂದ/ಅಭಿವೃದ್ಧಿದಾರರಿಂದ ಭರಿಸಿಕೊಳ್ಳುವ ಹಣವನ್ನು ಪ್ರಾಧಿಕಾರವು/ಸ್ಥಳೀಯ ಸಂಸ್ಥೆಗಳು ಪ್ರತ್ಯೇಕ ಲೆಕ್ಕ ಶೀರ್ಷಿಕೆಯಡಿ ಖಾತೆ ತೆರೆದು ಇಡತಕ್ಕದ್ದು ಹಾಗೂ ಈ ಹಣವನ್ನು ಮಹಾಯೋಜನೆಯಲ್ಲಿ ಕಾಯ್ದಿರಿಸಿರುವ ಉದ್ಯಾನವನ/ಬಯಲು ಜಾಗಗಳನ್ನು ಸರ್ಕಾರದ ಪೂರ್ವಾನುಮತಿಯೊಂದಿಗೆ ಭೂ ಸ್ವಾಧೀನಪಡಿಸಿಕೊಳ್ಳಲು ಮಾತ್ರ ಬಳಸಿಕೊಳ್ಳತಕ್ಕದ್ದು ಹಾಗೂ ಪ್ರಾಧಿಕಾರ ಯಾವುದೇ ಕಾರಣಕ್ಕೂ ಈ ಹಣವನ್ನು ಬೇರೆ ಉದ್ದೇಶಕ್ಕೆ ಬಳಸಬಾರದು.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎಂ. ವಾಸುದೇವ ರಾವ್
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (100 ಪ್ರತಿಗಳು)